# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ.ಸಿದ್ದಪ್ಪ.ಬಿ.ಮುಜಗೊಂಡ., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಝಳಕಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ-ಇವರ ವಿರುದ್ಧ ಶಿಸ್ತುಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

01. ಶ್ರೀ.ಯಶವಂತರಾಯಗೌಡ.ವಿ.ಪಾಟೀಲ., ಮಾನ್ಯ ಶಾಸಕರು, ಇಂಡಿ ಮತಕ್ಷೇತ್ರ, ವಿಜಯಪುರ-ಇವರ ಪತ್ರ, ದಿನಾಂಕ: 19.03.2015.
02. ಸಮಸಂಖ್ಯೆಯ ಸರ್ಕಾರದ ಪತ್ರ, ದಿನಾಂಕ: 19.03.2015.
03. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಡಿಟಿಇ 14 ಡಿಇಕ್ಯೂ (1) 2014/8481, ದಿನಾಂಕ: 15-04-2015.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಪತ್ರದಲ್ಲಿ ಶ್ರೀ.ಯಶವಂತರಾಯಗೌಡ.ವಿ.ಪಾಟೀಲ., ಮಾನ್ಯ ಶಾಸಕರು, ಇಂಡಿ ಮತಕ್ಷೇತ್ರ, ವಿಜಯಪುರ-ಇವರು ಸರ್ಕಾರಿ ಪಾಲಿಟೆಕ್ನಿಕ್, ಝಳಕಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ-ಈ ಸಂಸ್ಥೆಯ ಕಟ್ಟಡದ ಶಂಕುಸ್ಥಾಪನಾ ಸಮಾರಂಭದ ಆಮಂತ್ರಣಪತ್ರಿಕೆಯಲ್ಲಿ ಡಾ.ಸಾರ್ವಭೌಮ ಬಗಲಿ., ಮಾಜಿ ಶಾಸಕರು, ಇಂಡಿ ತಾಲ್ಲೂಕು, ವಿಜಯಪುರಜಿಲ್ಲೆ-ಇವರನ್ನು 'ವಿಶೇಷ ಆಹ್ವಾನಿತ'ರೆಂದು ಮುದ್ರಿಸಿ ಶಿಷ್ಟಾಚಾರ ಉಲ್ಲಂಘನೆ ಮಾಡಿರುವುದರಿಂದ ಆಮಂತ್ರಣಪತ್ರಿಕೆಯನ್ನು ಪರಿಶೀಲಿಸಿ, ಶಿಷ್ಟಾಚಾರ ಉಲ್ಲಂಘನೆ ಮಾಡಿರುವ ಅಧಿಕಾರಿಗಳ ವಿರುದ್ಧ ಕೂಡಲೇ ಶಿಸ್ತುಕ್ರಮ ಜರುಗಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ನಿರ್ದೇಶಕರಿಗೆ ಈ ಪ್ರಕರಣದ ಬಗ್ಗೆ ಪರಿಶೀಲಿಸಿ ಶಿಷ್ಟಾಚಾರ ಉಲ್ಲಂಘಿಸಿರುವ ಅಧಿಕಾರಿಯ ವಿರುದ್ಧ ಶಿಸ್ತುಕ್ರಮ ಜರುಗಿಸಿ, ಇನ್ನು ಮುಂದೆ ಇಂತಹ ಘಟನೆಗಳು ನಡೆಯದಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ಕೋರಲಾಗಿತ್ತು.

ಮೇಲೆ ಓದಲಾದ ಕ್ರಮಸಂಖ್ಯೆ (3)ರ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ನಿರ್ದೇಶಕರು, ಸದರಿ ಸಂಸ್ಥೆಯ ಪ್ರಾಂಶುಪಾಲರಾದ ಶ್ರೀ.ಸಿದ್ದಪ್ಪ.ಬಿ.ಮುಜಗೊಂಡ., ರವರಿಗೆ ನೋಟೀಸನ್ನು ಜಾರಿಗೊಳಿಸಿ, ಶಿಷ್ಟಾಚಾರ ಉಲ್ಲಂಘಿಸಿರುವ ಬಗ್ಗೆ ತಮ್ಮ ವಿರುದ್ಧ ಏಕೆ ಶಿಸ್ತುಕ್ರಮ ಜರುಗಿಸಬಾರದೆಂದು 03 ದಿನಗಳೊಳಗಾಗಿ ಲಿಖಿತ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿದ್ದರೂ ಕೂಡ ಶ್ರೀ.ಸಿದ್ದಪ್ಪ.ಬಿ.ಮುಜಗೊಂಡ., ರವರು, ಈ ಬಗ್ಗೆ ಯಾವುದೇ ಲಿಖಿತ ಸಮಜಾಯಿಷಿಯನ್ನು ನೀಡದೇ ಬೇಜವಾಬ್ದಾರಿತನದಿಂದ ವರ್ತಿಸಿರುತ್ತಾರೆ. ಸದರಿಯವರು ಕರ್ತವ್ಯದಲ್ಲಿ ಸತ್ಯ, ನಿಷ್ಠೆ ಹಾಗೂ ಪ್ರಾಮಾಣಿಕತೆಯನ್ನು ತೋರಿಸಲು ವಿಫಲರಾಗಿ, ಒಬ್ಬ ಜವಾಬ್ದಾರಿಯುತ ಸರ್ಕಾರಿ ಅಧಿಕಾರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ, ಕೆ.ಸಿ.ಎಸ್.ನಡತೆ ನಿಯಮಾವಳಿ, 1966ರ ನಿಯಮ 3 (1)ರ (i) (i i) ಮತ್ತು (i i i) ಅನ್ನು ಉಲ್ಲಂಘಿಸಿರುವ ಆರೋಪಕ್ಕೆ ಒಳಗಾಗಿರುತ್ತಾರೆ. ಆದ್ದರಿಂದ ಶಿಷ್ಟಾಚಾರ ಉಲ್ಲಂಘನೆಯ ಜೊತೆಗೆ ಮೇಲಧಿಕಾರಿಗಳ ಆದೇಶವನ್ನು ಉಲ್ಲಂಘನೆ ಮಾಡಿರುವುದರಿಂದ ಸದರಿಯವರನ್ನು ಕೆಸಿಎಸ್ ಸಿಸಿಎ ನಿಯಮಾವಳಿ 10 (1) (ಡಿ)ರಡಿಯಲ್ಲಿ ನಿಲಂಬನೆಯಲ್ಲಿಡಬಹುದಾಗಿರುತ್ತದೆಂದು ನಿರ್ದೇಶಕರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಕರಣದ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 96 ಟಿಪಿಇ 2015,**

**ಬೆಂಗಳೂರು, ದಿನಾಂಕ: 11ನೇ ಮೇ 2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಪರಿಶೀಲಿಸಲಾಗಿ, ಶ್ರೀ.ಸಿದ್ದಪ್ಪ.ಬಿ.ಮುಜಗೊಂಡ., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಝಳಕಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ-ಇವರು ಸರ್ಕಾರಿ

ಪಾಲಿಟೆಕ್ನಿಕ್, ಝಳಕಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ-ಈ ಸಂಸ್ಥೆಯ ಕಟ್ಟಡದ ಶಂಕುಸ್ಥಾಪನಾ ಸಮಾರಂಭದ ಆಮಂತ್ರಣಪತ್ರಿಕೆಯಲ್ಲಿ ಡಾ.ಸಾರ್ವಭೌಮ ಬಗಲಿ., ಮಾಜಿ ಶಾಸಕರು, ಇಂಡಿ ತಾಲ್ಲೂಕು, ವಿಜಯಪುರಜಿಲ್ಲೆ-ಇವರನ್ನು 'ವಿಶೇಷ ಆಹ್ವಾನಿತ'ರೆಂದು ಮುದ್ರಿಸಿ ಶಿಷ್ಟಾಚಾರ ಉಲ್ಲಂಘನೆ ಮಾಡಿರುವುದಲ್ಲದೇ ಈ ಬಗ್ಗೆ ಜಾರಿಗೊಳಿಸಿದ್ದ ನೋಟೀಸಿಗೂ ಕೂಡ ಯಾವುದೇ ಉಚಿತ ಸಮಜಾಯಿಷಿಯನ್ನು ನೀಡದೇ ಬೇಜವಾಬ್ದಾರಿತನದಿಂದ ವರ್ತಿಸಿರುತ್ತಾರೆ. ಸದರಿಯವರು ಕರ್ತವ್ಯದಲ್ಲಿ ಸತ್ಯ, ನಿಷ್ಠೆ ಹಾಗೂ ಪ್ರಾಮಾಣಿಕತೆಯನ್ನು ತೋರಿಸಲು ವಿಫಲರಾಗಿ, ಒಬ್ಬ ಜವಾಬ್ದಾರಿಯುತ ಸರ್ಕಾರಿ ಅಧಿಕಾರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ, ಕೆ.ಸಿ.ಎಸ್.ನಡತೆ ನಿಯಮಾವಳಿ, 1966ರ ನಿಯಮ 3 (1)ರ (i) (ii) ಮತ್ತು (iii) ಅನ್ನು ಉಲ್ಲಂಘಿಸಿರುವ ಆರೋಪಕ್ಕೆ ಒಳಗಾಗಿರುತ್ತಾರೆ. ಆದ್ದರಿಂದ ಶ್ರೀ.ಸಿದ್ದಪ್ಪ.ಬಿ.ಮುಜಗೊಂಡ., ರವರು ಶಿಷ್ಟಾಚಾರ ಉಲ್ಲಂಘನೆಯ ಜೊತೆಗೆ ಮೇಲಧಿಕಾರಿಗಳ ಆದೇಶವನ್ನು ಉಲ್ಲಂಘನೆ ಮಾಡಿರುವುದರಿಂದ ಸದರಿಯವರನ್ನು ಇಲಾಖಾ ವಿಚಾರಣೆಯನ್ನು ಬಾಕಿಯಿರಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 10 (1) (ಡಿ)ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ನಿಲಂಬನೆಯಲ್ಲಿರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ನಾಗಭೂಷಣ್),
ಸರ್ಕಾರದ ಅಧೀನ ಕಾರ್ಯದರ್ಶಿ.
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

11/05/2015

ಗೆ:

1. ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಝಳಕಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ (ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಮುಖಾಂತರ).
4. ಸಂಬಂಧಪಟ್ಟ ಅಧಿಕಾರಿ/ನೌಕರರಿಗೆ (ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಝಳಕಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ -ಇವರ ಮುಖಾಂತರ).
5. ಶಾಖಾ ರಕ್ಷಾ ಕಡತ : ಹೆಚ್ಚಿನ ಪ್ರತಿ.

**ಹಿಂಬರಹಸಂಖ್ಯೆ:** ಡಿಟಿಇ 14 ಡಿಇಕ್ಯೂ (1) 2014 / 398 ದಿನಾಂಕ: 13/05/2015

ಮೇಲ್ಕಂಡ ಸರ್ಕಾರದ ಆದೇಶವನ್ನು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಈ ಕೆಳಕಂಡವರಿಗೆ ಕಳುಹಿಸಲಾಗಿದೆ.

**ಇವರಿಗೆ,**

1. ಶ್ರೀ.ಸಿದ್ದಪ್ಪ.ಬಿ.ಮುಜಗೊಂಡ, ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಝಳಕಿ, ಇಂಡಿ ತಾಲೂಕು, ವಿಜಯಪುರ ಜಿಲ್ಲೆ.
2. ಮಹಾಲೇಖಪಾಲರು(ಎ & ಇ), ಕರ್ನಾಟಕ, ಬೆಂಗಳೂರು.
3. ಜಂಟಿ ನಿರ್ದೇಶಕರು (ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು
5. ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಝಳಕಿ, ಸಂಬಂಧಪಟ್ಟವರಿಗೆ ಸರ್ಕಾರಿ ಆದೇಶವನ್ನು ಜಾರಿ ಮಾಡಿ ವರದಿ ಕಳುಹಿಸುವ ಸಲುವಾಗಿ.
6. ನಿರ್ದೇಶಕರ ಆಪ್ತಶಾಖೆಗೆ. ಮಾಹಿತಿಗಾಗಿ.
7. ಇಎಸ್‌ಟಿ(1)ಎ, ಇಎಸ್‌ಟಿ(9), ಇಎಸ್‌ಟಿ(7), ನಿರ್ದೇಶನಾಲಯ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.

ಆಡಳಿತಾಧಿಕಾರಿ.